**3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**C.C. No.508/2025**

**CW- 4** **PW:5**

| | |
|---|---|
| ಸಾಕ್ಷಿಯ ಹೆಸರು | ಃ ವಿನಾಯಕ ಅಸವಾಲೆಕರ |
| ತಂದೆ /ಗಂಡನ ಹೆಸರು | ಃ ವಿಜಯ |
| ವಯಸ್ಸು | ಃ 33 ವರ್ಷ |
| ಉದ್ಯೋಗ | ಃ ಕಟ್ಟಿಂಗ ಶಾಪ್ |
| ವಾಸಸ್ಥಳ | ಃ ಹುಬ್ಬಳ್ಳಿ |

ದಿಃ **27.05.2026.** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನನಗೆ ತೋರಿದ ನಿಪಿ.5 ಧೃಡಿಕೃತ ಅಮಾನತ್ತು ಪಂಚನಾಮೆಯಲ್ಲಿ ನನ್ನ ಸಹಿಗಳು ಇದ್ದು ಅವನ್ನು ನೋಡಿ ಗುರುತಿಸುತ್ತೇನೆ. ನಿಪಿ.5 ಕ್ಕೆ ಯಾವ ದಿನಾಂಕ, ಸ್ಥಳದಲ್ಲಿ ಮತ್ತು ಸಮಯದಲ್ಲಿ ಸಹಿ ಮಾಡಿದ್ದೇನೆ ಎಂದು ಹೇಳಲು ಆಗುವುದಿಲ್ಲ. ಯಾವ ಕಾರಣಕ್ಕೆ ಸಹಿ ಮಾಡಿದ್ದೇನೆ ಎನ್ನುವುದು ನೆನಪಿಲ್ಲ. ನಿಪಿ.5 ರಲ್ಲಿ ಏನು ಬರೆದಿದೆ ಎನ್ನುವುದು ಗೊತ್ತಿಲ್ಲ. ಸ್ಥಳವನ್ನು ಯಾರು ತೋರಿಸಿದರು ಎನ್ನುವುದು ಗೊತ್ತಿಲ್ಲ. ನನ್ನ ಜೊತೆ ಯಾರು ಇದ್ದರು ಎನ್ನುವುದು ಗೊತ್ತಿಲ್ಲ. ನನ್ನ ಸಮಕ್ಷಮ ಪೊಲಿಸರು ಏನೂ ಜಪ್ತಿ ಮಾಡಿಕೊಂಡಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ಎಲ್ಲಿಯೂ ನೋಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 20.08.2024 ರಂದು ನವನಗರ ಠಾಣಾ ಪೊಲಿಸರು ನನ್ನ ಮತ್ತು ಚಾಸಾಃ 3 ರವರ ಸಮಕ್ಷಮ ಸಾಯಂಕಾಲ 6.30 ರಿಂದ 7.15 ರವರೆಗೆ ನಿಪಿ.5 ರಂತೆ ಮಾಡಿದ ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ.5 ರಲ್ಲಿರುವ ಸ್ಥಳಗಳನ್ನು

ನ್ಯಾಯಾಲಯದ ಮುಂದೆ ಇರುವ ಆರೋಪಿ ತೋರಿಸಿದ್ದಾನೆ ಎಂದರೆ ಸರಿಯಲ್ಲ. ನಿಪಿ.5 ರ ಸಮಯದಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿತರಿಂದ ಮು ಮಾ 1 ರಿಂದ 3 ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮುಂದುವರೆದು ನ್ಯಾಯಾಲಯದ ಮುಂದೆ ಇರುವ ಆರೋಪಿ ಅಂಗಶೋಧನೆ ಮಾಡಿ ಒಂದು ತಿಳಿ ನೀಲಿ ಬಣ್ಣದ ಸ್ಯಾಮಸಂಗ ಮೊಬೈಲ್ ಸೆಟ್, ರೂ 300 ನಗದು ಹಣ ಮತ್ತು 3 ಸಣ್ಣ ಟ್ರಾನ್ಸ್ಪರಂಟ ಖಾಲಿ ಕವರಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ನಿಪಿ.5 ರಸಮಯದಲ್ಲಿ ನನ್ನ ಜೊತೆ ಚಾಸಾಃ 3 ರವರು ಸಹ ಇದ್ದರು ಎಂದರೆ ಸರಿಯಲ್ಲ. ನಿಪಿ.5 ರಲ್ಲಿರುವ ಎಲ್ಲ ವಿಷಯಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟಿಸವಾಲುಃ ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)
ಓ ಹೇ ಕೆ ಸರಿ ಇದೆ.

**(ಶ್ರೀ ರಮೇಶ ಎಸ್ ಗಾಣಿಗೇರ)**

**3** ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.